ಕರ್ನಾಟಕ ಸರ್ಕಾರ

**ಆಡಳಿತ ತರಬೇತಿ ಸಂಸ್ಥೆ,**

ಲಲಿತ ಮಹಲ್ ರಸ್ತೆ, ಮೈಸೂರು-570011.

ಸಂಖ್ಯೆ: ಎಟಿಐ/ 22 /ಇಎಸ್ಟಿ1/2020-ಆಡಳಿತ-ಆತಸಂ ದಿನಾಂಕ:11/01/2024

**ನೇಮಕಾತಿ ಅಧಿಸೂಚನೆ**

**ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇಲ್ಲಿ ಖಾಲಿಯಿರುವ ಬ್ಯಾಕ್ ಲಾಗ್ ಹುದ್ದೆಗಳ ನೇರ ನೇಮಕಾತಿಗೆ ಪರಿಶಿಷ್ಟ ಜಾತಿಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುತ್ತಿರುವ ಬಗ್ಗೆ.**

ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇಲ್ಲಿ ಬೆರಳಚ್ಚುಗಾರರು ಮತ್ತು ಗುಂಪು ಡಿ ವೃಂದದ ಹುದ್ದೆಗಳಲ್ಲಿ ಗುರ್ತಿಸಲಾಗಿರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವೆಗಳ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಾದ ಭರ್ತಿ ಮಾಡದ ಖಾಲಿ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಗಳು -2001 ಮತ್ತು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 53 ಸೆನೆನಿ 2007, ದಿ: 04.01.2008 ರ ಪ್ರಕಾರ ಸಮತಳ ಮೀಸಲಾತಿ ಅನ್ವಯ ಭರ್ತಿ ಮಾಡಲು ಉದ್ದೇಶಿಸಲಾಗಿದೆ.

ಕೆಳಕಂಡ ಹುದ್ದೆಗಳನ್ನು ಅರ್ಹ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ ಸಂ | ಹುದ್ದೆಯ ಹೆಸರು | ಪ.ಜಾ | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|
| 1. | ಬೆರಳಚ್ಚುಗಾರರು | 01 -ಪ.ಜಾತಿ ಸಾಮಾನ್ಯ | 01 |
| 2 | ಗುಂಪು ಡಿ | 01-ಪ.ಜಾತಿ ಮಹಿಳೆ | 01 |

1. ಅರ್ಜಿಗಳನ್ನು ಆನ್ ಲೈನ್ ಮೂಲಕ ಮಾತ್ರ ಭರ್ತಿ ಮಾಡುವುದು.
2. ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿಗಳನ್ನು ಭರ್ತಿ ಮಾಡುವ ಮೊದಲು atimysore.karnataka.gov.in ನಲ್ಲಿ ಪ್ರಕಟಿಸಲಾಗಿರುವ ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿ ತಿಳಿದುಕೊಳ್ಳತಕ್ಕದ್ದು.

    ಅ) ಆನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಪ್ರಾರಂಭಿಕ ದಿನಾಂಕ: **16/01/2024**

    ಆ) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **15/02/2024**

**ವಿಶೇಷ ಸೂಚನೆ**: ಆನ್ ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) 0821-2522142/2443839 ಮೂಲಕ ಕಚೇರಿ ಕೆಲಸದ ಸಮಯದಲ್ಲಿ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

**ಅರ್ಜಿಗಳನ್ನು ಆನ್ ಲೈನ್ ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಈ ರೀತಿ ಬಂದಂತಹ ಅರ್ಜಿಗಳನ್ನು ತೀರಸ್ಕರಿಸಲಾಗುವುದು.**

3. **ಪರೀಕ್ಷಾ ನೊಂದಣಿ ಶುಲ್ಕ**: ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು- 1977 ರ ನಿಯಮ 13 ರಲ್ಲಿರುವಂತೆ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿರುತ್ತದೆ.
4. **ಅರ್ಹತಾ ಷರತ್ತುಗಳು:**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ಪುರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ರಾಜ್ಯ ಸರ್ಕಾರದ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರ ಕಾಯ್ದಿರಿಸಿಕೊಂಡಿದೆ

ಉ) ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

ಊ) ನೈತಿಕ ದುರ್ನಡತೆಯಿಂದಾಗಿ/ ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೆ ಒಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ ಕೇಂದ್ರ/ ಸ್ಥಳೀಯ ಸಂಸ್ಥೆ/ ಕೈಗಾರಿಕಾ/ ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ಇನ್ನಿತರೆ ಸರ್ಕಾರದ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ/ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದುಹಾಕಿದ್ದಲ್ಲಿ/ ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ಅನರ್ಹರಾಗುತ್ತಾರೆ.

5. **ಶೈಕ್ಷಣಿಕ ವಿದ್ಯಾರ್ಹತೆ/ ವೇತನ ಶ್ರೇಣಿ:**

ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯ/ ಪರೀಕ್ಷಾ ಮಂಡಳಿಗಳಿಂದ ಆಯಾ ಹುದ್ದೆಗಳಿಗೆ ನಿಗಧಿ ಪಡಿಸಿರುವ ಅರ್ಹತೆಯ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಅಥವಾ ಸರ್ಕಾರವು ಅಂತಹ ಪರೀಕ್ಷೆಗೆ ಸಮಾನವೆಂದು ಅಂಗೀಕರಿಸಿದ ವಿದ್ಯಾರ್ಹತೆಯನ್ನು ಹೊಂದಿರಬೇಕು. ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಬೇಕು. ಪ್ರತಿ ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆಗಳು ಈ ಕೆಳಗಿನಂತಿವೆ.

| ಕ್ರ ಸಂ | ಹುದ್ದೆ ಮತ್ತು ವೇತನ ಶ್ರೇಣಿ | ಶೈಕ್ಷಣಿಕ ವಿದ್ಯಾರ್ಹತೆ |
|---|---|---|
| 1. | ಬೆರಳಚ್ಚುಗಾರರು<br>21400-42000 | ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆ ಮತ್ತು ಕನ್ನಡ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಹಿರಿಯ ಬೆರಳಚ್ಚು ಪರೀಕ್ಷೆಯನ್ನು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅಥವಾ ಕನ್ನಡ ಬೆರಳಚ್ಚಿನೊಂದಿಗೆ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ತೇರ್ಗಡೆಯಾಗಿರತಕ್ಕದ್ದು. |
| 2 | ಗುಂಪು ಡಿ<br>17000-28950 | ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯನ್ನು ತೇರ್ಗಡೆಯಾಗಿರತಕ್ಕದ್ದು. |

**ಷರಾ: ಪಿ.ಯು.ಸಿ ಮತ್ತು ಎಸ್ ಎಸ್ ಎಲ್ ಸಿ ಪರೀಕ್ಷೆಗೆ ತತ್ಸಮಾನ ವಿದ್ಯಾರ್ಹತೆ ಎಂದರೆ ಸರ್ಕಾರಿ ಸುತ್ತೋಲೆ ಸಂಖ್ಯೆ : ಸಿಆಸುಇ 81 ಸೇವನೆ 2017, ದಿ: 27-02-2018 ರನುಸಾರ ನಮೂದಿಸಿರುವ ವಿದ್ಯಾರ್ಹತೆ ಯಾಗಿರುತ್ತದೆ.**

6. **ಪಿಂಚಣಿ ಸೌಲಭ್ಯ:**

ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ (ಎಸ್.ಪಿ.ಎಲ್) 04 ಪಿ.ಇ.ಟಿ 2005, ದಿನಾಂಕ: 31.03.2006 ರಂತೆ

7. **ವಯೋಮಿತಿ:** ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

**ಅ) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ**

**ಆ) ಗರಿಷ್ಠ 40 ವರ್ಷ ವಯಸ್ಸನ್ನು ತಲುಪಿರತಕ್ಕದ್ದಲ್ಲ.**

ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರದಲ್ಲಿ ನಮೂದಿಸಿರುವಂತೆ ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

**ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:** ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ದಿನಾಂಕ:15/02/2024ರ ಒಳಗೆ ಜಾತಿ ಪ್ರಮಾಣ ಪತ್ರವನ್ನು ಪಡೆದಿರಬೇಕು.

8. **ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ. ಆದರೆ ಒಂದು ಹುದ್ದೆಗೆ ಒಂದು ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣದಿಂದಲೂ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ ಹಾಗೂ ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಯನ್ನು ಸಲ್ಲಿಸಿದ್ದಲ್ಲಿ ಅಭ್ಯರ್ಥಿಯು ಆ ಹುದ್ದೆಗೆ ಸಲ್ಲಿಸಿದ ಕೊನೆಯ ಅರ್ಜಿಯನ್ನು ನೇಮಕಾತಿಯ ಮುಂದಿನ ಕ್ರಮಗಳಿಗೆ ಪರಿಗಣಿಸಲಾಗುವುದು ಮತ್ತು ಬಾಕಿ ಉಳಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**
9. **ಖಾಯಂ ಪೂರ್ವ ಅವಧಿ/ ಕನಿಷ್ಠ ಸೇವೆ/ ನಿಯುಕ್ತಿ:**
    - ಆಯ್ಕೆಯಾದ ಅಭ್ಯರ್ಥಿಗಳನ್ನು ಆಡಳಿತ ತರಬೇತಿ ಸಂಸ್ಥೆ, ಮೈಸೂರಿನ ಅಧಿಕಾರ ವ್ಯಾಪ್ತಿಯ ಯಾವುದೇ ಜಿಲ್ಲೆಯ ಸಂಸ್ಥೆಗಳಿಗೆ ನಿಯುಕ್ತಿಗೊಳಿಸಲಾಗುವುದು ಮತ್ತು 2 ವರ್ಷಗಳ ಪರೀಕ್ಷಾರ್ಥ (Probationary) ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಯಾವುದೇ ರೀತಿಯ ವರ್ಗಾವಣೆಗೆ ಅವಕಾಶವಿರುವುದಿಲ್ಲ.
    - ನೇಮಕಗೊಂಡ ಅಭ್ಯರ್ಥಿಯು ನಿಗದಿಗೊಳಿಸಿದ ವಿದ್ಯಾರ್ಹತೆಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದಲ್ಲಿ ಹೆಚ್ಚಿನ ವಿದ್ಯಾರ್ಹತೆ ಆಧಾರದ ಅಡಿಯಲ್ಲಿ ಉನ್ನತ ಹುದ್ದೆಗೆ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ.

10. **ಕನ್ನಡ ಭಾಷೆ:**

ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುವವರು ಕನ್ನಡ ಭಾಷೆಯನ್ನು ಪ್ರಥಮ ಭಾಷೆಯಾಗಿ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದಲ್ಲಿ ಅಂತಹ ಅಭ್ಯರ್ಥಿಗಳು ಕನ್ನಡ ಭಾಷಾ ಪರೀಕ್ಷೆಯಲ್ಲಿ ಪ್ರತ್ಯೇಕವಾಗಿ ಉತ್ತೀರ್ಣ ಹೊಂದುವ ಅವಶ್ಯಕತೆ ಇರುವುದಿಲ್ಲ. ಒಂದು ವೇಳೆ ಕನ್ನಡ ಭಾಷೆಯನ್ನು ಪ್ರಥಮ ಭಾಷೆಯಾಗಿ ಅಥವಾ ದ್ವಿತೀಯ ಭಾಷೆಯಾಗಿ ಉತ್ತೀರ್ಣತೆ ಹೊಂದದೇ ಇರುವವರು ಸೇವೆಗೆ ಹಾಜರಾದ ನಂತರ ಪರೀಕ್ಷಣಾ ಅವಧಿ ಮುಕ್ತಾಯಗೊಳ್ಳುವ ಮೊದಲೇ ಪ್ರತ್ಯೇಕವಾಗಿ ಪರೀಕ್ಷೆ ಬರೆದು ತೇರ್ಗಡೆ ಹೊಂದುವುದು ಕಡ್ಡಾಯವಾಗಿರುತ್ತದೆ.

11. **ಆಯ್ಕೆ ವಿಧಾನ:**

ಕರ್ನಾಟಕ ನಾಗರೀಕ ಸೇವೆಗಳ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಾದ ಭರ್ತಿ ಮಾಡದ ಖಾಲಿ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಗಳು- 2001, ದಿನಾಂಕ: 21.11.2001 ಮತ್ತು ಸದರಿ ನಿಯಮಗಳ ಮೊದಲನೇ ತಿದ್ದುಪಡಿ ದಿನಾಂಕ: 01.06.2001, ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 53 ಸೆನೆನಿ 2007,

ದಿನಾಂಕ: 04.01.2008 ಪ್ರಕಾರ ಸಮತಳ ಮೀಸಲಾತಿ ಅನ್ವಯ ಭರ್ತಿ ಮಾಡಲಾಗುವುದು. ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಅಂಕಗಳ ಜೇಷ್ಟತೆಯ ಆಧಾರದ ಮೇಲೆ 29 ವರ್ಷಗಳ ವಯಸ್ಸನ್ನು ತಲುಪಿರುವ ಆದರೆ 40 ವರ್ಷಗಳ ವಯಸ್ಸನ್ನು ತಲುಪದಿರುವ ಅಭ್ಯರ್ಥಿಗಳ ಪ್ರಥಮ ಪಟ್ಟಿ ಮತ್ತು 18 ವರ್ಷಗಳ ವಯಸ್ಸನ್ನು ತಲುಪಿರುವ ಆದರೆ 29 ವರ್ಷಗಳ ವಯಸ್ಸನ್ನು ತಲುಪದಿರುವ ಅಭ್ಯರ್ಥಿಗಳ ದ್ವಿತೀಯ ಪಟ್ಟಿಯನ್ನು ತಯಾರಿಸಲಾಗುವುದು. ಆಯ್ಕೆಗೆ ಪ್ರಥಮ ಪಟ್ಟಿಯಲ್ಲಿ ಪ್ರಥಮ ಸ್ಥಾನ ಪಡೆಯುವ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು. ಒಂದು ವೇಳೆ ಪ್ರಥಮ ಪಟ್ಟಿಯಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯರಾಗದಿದ್ದಲ್ಲಿ ದ್ವಿತೀಯ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

- **ಬೆರಳಚ್ಚುಗಾರರ ಹುದ್ದೆಗೆ ಮೇಲೆ ತಿಳಿಸಿರುವಂತೆ ಪ್ರಥಮ ಪಟ್ಟಿ ಮತ್ತು ದ್ವಿತೀಯ ಪಟ್ಟಿಯಲ್ಲಿನ ಅಭ್ಯರ್ಥಿಗಳು ಅರ್ಹತಾದಾಯಕ ಪರೀಕ್ಷೆಗಳಲ್ಲಿ ಪಡೆದಿರುವ ಶೇಕಡವಾರು ಅಂಕಗಳ ಆಧಾರದ ಮೇಲೆ 1: 25 ಅನುಪಾತದಲ್ಲಿ ಕೌಶಲ್ಯ ಪರೀಕ್ಷೆಗಳಿಗೆ ಅಭ್ಯರ್ಥಿಗಳನ್ನು ಆಹ್ವಾನಿಸಲಾಗುವುದು ಮತ್ತು ಕೌಶಲ್ಯ ಪರೀಕ್ಷೆಯಲ್ಲಿ ಶೇ. 50 ರಷ್ಟು ಅಂಕಗಳನ್ನು ಪಡೆಯುವ ಅಭ್ಯರ್ಥಿಗಳ ಪೈಕಿ ಅರ್ಹತಾದಾಯಕ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳು ಮತ್ತು ಕೌಶಲ್ಯ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳನ್ನು ಒಟ್ಟುಗೂಡಿಸಿ ಅದರ ಶ್ರೇಯಾಂಕದ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಕೌಶಲ್ಯ ಮಾದರಿ ಪಠ್ಯ ಕ್ರಮದ ವಿವರವನ್ನು ಅನುಬಂಧ -1 ರಲ್ಲಿ ನೀಡಿದೆ.**
- **ಕೌಶಲ್ಯ ಪರೀಕ್ಷೆಯಲ್ಲಿ ಶೇ.50 ರಷ್ಟು ಅಂಕಗಳನ್ನು ಪಡೆದವರನ್ನು ಮಾತ್ರ ಪರಿಗಣಿಸಲಾಗುವುದು.**
- **ಗುಂಪು ಡಿ ಹುದ್ದೆಗೆ ಅರ್ಹತಾದಾಯಕ ಪರೀಕ್ಷೆಗಳಲ್ಲಿ ಪಡೆದಿರುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು**
- **ಅಧಿಸೂಚಿಸಲಾಗಿರುವ ಯಾವುದೇ ಹುದ್ದೆಗಳ ನೇರ ನೇಮಕಾತಿಗಾಗಿ ಯಾವುದೇ ವಿಧವಾದ ಸಂದರ್ಶನ ಇರುವುದಿಲ್ಲ**.

12. **ಮೂಲ ದಾಖಲಾತಿಗಳ ಪರಿಶೀಲನೆ:**

ಅಧಿಸೂಚಿಸಲಾಗಿರುವ ಗುಂಪು 'ಡಿ' ವೃಂದದ ಹುದ್ದೆಗೆ ಅಭ್ಯರ್ಥಿಯು ಅರ್ಹತಾ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳ ಆಧಾರದ ಮೇಲೆ ಮತ್ತು ಬೆರಳಚ್ಚುಗಾರರ ಹುದ್ದೆಗೆ ಶೈಕ್ಷಣಿಕ ಪರೀಕ್ಷೆ ಹಾಗೂ ಕೌಶಲ್ಯ ಪರೀಕ್ಷೆಯಲ್ಲಿ ಪಡದಿರುವ ಅಂಕಗಳ ಆಧಾರದ ಮೇಲೆ ಮೀಸಲಾತಿಗನುಸಾರವಾಗಿ 1:5 ಆಧಾರದಲ್ಲಿ ಮೂಲ ದಾಖಲಾತಿಗಳ ಪರಿಶೀಲನೆಗೆ ಕರೆಯಲಾಗುವುದು. ಮೂಲ ದಾಖಲಾತಿಗಳ ಪರಿಶೀಲನೆ ವೇಳೆಯಲ್ಲಿ ಅಭ್ಯರ್ಥಿಗಳು ಶೈಕ್ಷಣಿಕ ಮತ್ತು ಮೀಸಲಾತಿ ಸಂಬಂಧಿತ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

**ಅಭ್ಯರ್ಥಿಗಳಿಗೆ ದಾಖಲೆಗಳ ಪರಿಶೀಲನೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆ ನೀಡಲಾಗುವುದಿಲ್ಲ.**

13. **ಪ್ರಮುಖ ಸೂಚನೆಗಳು:** ಅಭ್ಯರ್ಥಿಗಳು ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶವಿರುವುದಿಲ್ಲ. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು/ ದಾಖಲಾತಿಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧೂವಾಗಿರುವಂತೆ ಆಯ್ಕೆ ಪ್ರಾಧಿಕಾರವು ಸೂಚಿಸಿದ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.

   a) ಕಡ್ಡಾಯವಾಗಿ ಹಾಜರುಪಡಿಸಬೇಕಾದ ವಿದ್ಯಾರ್ಹತೆ/ ಜನ್ಮ ದಿನಾಂಕ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
   b) ರಾಜ್ಯ ಸರ್ಕಾರಿ/ ಕೇಂದ್ರ ಸರ್ಕಾರಿ ಸ್ಥಳಿಯ ಪ್ರಾಧಿಕಾರ ನೌಕರರು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪತ್ರವನ್ನು ಒದಗಿಸಬೇಕು ಇಲ್ಲದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
   c) ಶೈಕ್ಷಣಿಕ ಅರ್ಹತಾ ಪರೀಕ್ಷೆಗೆ ಕುಳಿತಿರುವ ಮತ್ತು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದೇ ಇರುವ ಸಂದರ್ಭದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

14. **<u>ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು:</u>**

   I. ಜಾತಿ ಮೀಸಲಾತಿ ಪ್ರಮಾಣ ಪತ್ರ
   II. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ ವರ್ಗಾವಣೆಯ ಪ್ರಮಾಣ ಪತ್ರ (ಟಿ.ಸಿ)/ ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Extract of Cumulative Record)
   III. ಸೇವೆಯಲ್ಲಿರುವ ಅಭ್ಯರ್ಥಿಗಳು, ಸೇವೆಯಲ್ಲಿರುವ ಬಗ್ಗೆ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರಬೇಕು.
   IV. ಆಯಾ ಹುದ್ದೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆ ಹೊಂದಿರುವ ಪ್ರಮಾಣ ಪತ್ರಗಳು ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿಗಳು.
   V. ಶೈಕ್ಷಣಿಕ ಹಾಗೂ ವೃತ್ತಿಪರ ಸಂಬಂಧಿತ ಅಂಕಪಟ್ಟಿಗಳಲ್ಲಿ ಅಂಕಗಳಿಗೆ ಬದಲಾಗಿ ಗ್ರೇಡ್ ನಮೂದಿಸಲಾಗಿದ್ದರೆ, ಸಂಬಂಧಪಟ್ಟ ಬೋರ್ಡ್/ವಿಶ್ವವಿದ್ಯಾನಿಲಯದ ನಿಯಮಾನುಸಾರ ಗ್ರೇಡ್ ನ್ನು ಅಂಕಗಳಿಗೆ ಪರಿವರ್ತಿಸಿ, ಅಂಕ ಪರಿವರ್ತನಾ ಪಟ್ಟಿಯನ್ನು ದಾಖಲಾತಿ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸುವುದು.

ಈ ಮೇಲಿನ ಅರ್ಹತೆ, ಮೀಸಲಾತಿ ಇತ್ಯಾದಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರವೇ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು.

15. **<u>ಹೆಚ್ಚುವರಿ ಸೂಚನೆಗಳು:</u>**

1. ಅಭ್ಯರ್ಥಿಗಳು ಆನ್ ಲೈನ್ ಅರ್ಜಿ ಭರ್ತಿ ಮಾಡುವ ಮುನ್ನ ನೇಮಕಾತಿ ಅಧಿಸೂಚನೆಗಳನ್ನು, ಸಾಮಾನ್ಯ ಸೂಚನೆಗಳು, ಪ್ರಮುಖ ಸೂಚನೆಗಳನ್ನು ಓದಿ ಮನದಟ್ಟು ಮಾಡಿಕೊಂಡು ಶೈಕ್ಷಣಿಕ ವಿದ್ಯಾರ್ಹತೆ, ವಯೋಮಿತಿ, ಮೀಸಲಾತಿ ಮತ್ತಿತರ ವಿವರಗಳನ್ನು ಖಚಿತಪಡಿಸಿಕೊಂಡು ತಪ್ಪಿಲ್ಲದೆ ಆನ್ ಲೈನ್ ಅರ್ಜಿ ಭರ್ತಿ ಮಾಡುವುದು.
2. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.
3. ಅಭ್ಯರ್ಥಿಗಳು ಆನ್ ಲೈನ್ ನಲ್ಲಿ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅರ್ಹರೆಂದು ಕಂಡು ಬಂದಂತಹ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಯಾವುದೇ ಹಂತದಲ್ಲಿ ಅಪೂರ್ಣ/ ಅಸ್ಪಷ್ಟ/ತಪ್ಪು ಮಾಹಿತಿ ನೀಡಿದಲ್ಲಿ ಅಭ್ಯರ್ಥಿಗಳೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ ಹಾಗೂ ಅಂತಹವರ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು.
4. ಅರ್ಜಿಯಲ್ಲಿನ ಮಾಹಿತಿಗಳು ದೋಷಪೂರಿತ ಹಾಗೂ ತಪ್ಪಾಗಿದ್ದಲ್ಲಿ, ಅಭ್ಯರ್ಥಿಗಳೇ ಸಂಪೂರ್ಣವಾಗಿ ಜವಾಬ್ದಾರರಾಗಿರುತ್ತಾರೆ ಹಾಗೂ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5. ಶೈಕ್ಷಣಿಕ ಹಾಗೂ ವೃತ್ತಿಪರ ಶಿಕ್ಷಣದ ಅಂಕ ವಿವರಗಳನ್ನು ಅಂಕಪಟ್ಟಿಯಲ್ಲಿರುವಂತೆ ಎಲ್ಲಾ ವರ್ಷಗಳ ಗರಿಷ್ಠ ಅಂಕಗಳು ಹಾಗೂ ಪಡೆದ ಅಂಕಗಳನ್ನು ನಿಗಧಿತ ಅಂಕಣಗಳಲ್ಲಿ ಭರ್ತಿ ಮಾಡುವುದು. ಶೈಕ್ಷಣಿಕ ಹಾಗೂ ವೃತ್ತಿಪರ ಸಂಬಂಧಿತ ಅಂಕಪಟ್ಟಿಗಳಲ್ಲಿ ಅಂಕಗಳಿಗೆ ಬದಲಾಗಿ ಗ್ರೇಡ್ ನಮೂದಿಸಲಾಗಿದ್ದರೆ, ಅಂತಹ ಸಂಧರ್ಭದಲ್ಲಿ ಸಂಬಂಧಪಟ್ಟ ಬೋರ್ಡ್/ವಿಶ್ವವಿದ್ಯಾನಿಲಯದಿಂದ ನಿಯಮಾನುಸಾರ ಗ್ರೇಡ್ ಅನ್ನು ಅಂಕಗಳಿಗೆ ಪರಿವರ್ತಿಸಿದ ಅಂಕಗಳನ್ನು ನಿಗಧಿತ ಅಂಕಣಗಳಲ್ಲಿ ಭರ್ತಿ ಮಾಡುವುದು. ಬೋರ್ಡ್/ ವಿಶ್ವವಿದ್ಯಾಲಯಗಳು ಗ್ರೇಡ್ ನಿಂದ ಅಂಕಗಳಿಗೆ ಅಳವಡಿಸಲಾಗುವ ಅಂಕ ಪರಿವರ್ತನಾ ಪಟ್ಟಿಯನ್ನು ದಾಖಲಾತಿ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸುವುದು ಕಡ್ಡಾಯವಾಗಿರುತ್ತದೆ
6. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

7. ಸ್ಪಷ್ಟವಾಗಿರದ ಫೋಟೊ ಮತ್ತು ಸಹಿಗಳನ್ನು Up-Load ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
8. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೊ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
9. ಈ ನೇಮಕಾತಿಯನ್ನು ಭಾಗಶಃ/ ಪೂರ್ಣವಾಗಿ ಯಾವುದೇ ಹಂತದಲ್ಲಿ ಯಾವುದೇ ಕಾರಣ ನೀಡದೇ ರದ್ದುಪಡಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.
10. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಮಹಾನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆಯ ನಿರ್ಧಾರವೇ ಅಂತಿಮವಾಗಿರುತ್ತದೆ.
11. ಆಡಳಿತ ತರಬೇತಿ ಸಂಸ್ಥೆಯ ಕೇಂದ್ರ ಕಚೇರಿಯು ಮೈಸೂರಿನಲ್ಲಿರುವುದರಿಂದ ಸದರಿ ನೇಮಕಾತಿ ಅಧಿಸೂಚನೆಗೆ ಸಂಬಂಧಿಸಿದಂತೆ ಯಾವುದೇ ಕಾನೂನಾತ್ಮಕ ವಿವಾದಗಳು ಮೈಸೂರು ನಗರದಲ್ಲಿರುವ ನ್ಯಾಯಾಲಯದ ವ್ಯಾಪ್ತಿಗೆ ಮಾತ್ರ ಒಳಪಟ್ಟಿರುತ್ತದೆ.
12. ಆನ್ ಲೈನ್ ಅರ್ಜಿಯಲ್ಲಿ ನಮೂದಿಸಿದ ಅಭ್ಯರ್ಥಿಯ ಎಲ್ಲಾ ವಿವರಗಳು ಸಮರ್ಪಕವಾಗಿದೆ ಎಂದು ದೃಢಪಡಿಸಿಕೊಂಡು ಘೋಷಣೆ ನೀಡಿದ ನಂತರದಲ್ಲಿ ಯಾವುದೇ ಬದಲಾವಣೆಗೆ ಅವಕಾಶ ಇರುವುದಿಲ್ಲ.

16. **ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-**

| | | | |
|---|---|---|---|
| ಪ.ಜಾ. | ಪರಿಶಿಷ್ಟ ಜಾತಿ | SC | Schedule Caste |
| ಪ.ಪಂ | ಪರಿಶಿಷ್ಟ ಪಂಗಡ | ST | Schedule Tribe |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ | ಅಂಗವಿಕಲ | PH | Physically Handicapped Person |

17. **ಪತ್ರ ವ್ಯವಹಾರ:**

ಆಡಳಿತ ತರಬೇತಿ ಸಂಸ್ಥೆಯು ಸದರಿ ನೇಮಕಾತಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದಾಗ್ಯೂ ಆನ್ ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಉಂಟಾದಲ್ಲಿ, ಸಹಾಯವಾಣಿ (Help Line No) 0821-2443835/2443839 ದೂರವಾಣಿ ಸಂಖ್ಯೆಗೆ ಕಛೇರಿ ಸಮಯದಲ್ಲಿ ಸಂಪರ್ಕಿಸತಕ್ಕದ್ದು. ಅಭ್ಯರ್ಥಿಯು ಮಾಹಿತಿಗಾಗಿ ಸಂಪರ್ಕಿಸುವ ಸಮಯದಲ್ಲಿ ಈ ಹುದ್ದೆಗಳಿಗೆ ಸಲ್ಲಿಸಿದ ಅರ್ಜಿಯ ಕ್ರಮ ಸಂಖ್ಯೆ, ಜನ್ಮ ದಿನಾಂಕ ಇತ್ಯಾದಿ ವಿವರಗಳನ್ನು ನೀಡತಕ್ಕದ್ದು.

ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿದ ನಂತರ ಮುಂದಿನ ವ್ಯವಹಾರಗಳಿಗೆ ಅರ್ಜಿ ಪ್ರತಿಯನ್ನು ಪ್ರಿಂಟ್ ತೆಗೆದುಕೊಳ್ಳುವುದು.

18. **ದುರ್ನಡತೆ:** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂಬ ಬಗ್ಗೆ ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು, ಕಂಡು ಬಂದಲ್ಲಿ ಅಭ್ಯರ್ಥಿಯು ಕ.ನಾ.ಸೇ( ಸಾಮಾನ್ಯ ನೇಮಕಾತಿ) ನಿಯಮ 1977ರನ್ವಯ ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ ನೇಮಕಾತಿಗೆ ಅನರ್ಹರಾಗುತ್ತಾರೆ.

ಪ್ರಸ್ತುತ ಅಧಿಸೂಚಿಸಲಾಗಿರುವ ಹುದ್ದೆಗಳ ನೇಮಕಾತಿಯು ಪಾರದರ್ಶಕವಾಗಿರುವುದರಿಂದ ಯಾವುದೇ ಅನಧಿಕೃತ ವ್ಯಕ್ತಿಗಳು ಪ್ರಕ್ರಿಯೆ, ಸ್ಥಳ ನಿಯೋಜನೆ ಮತ್ತು ಇನ್ನು ಮುಂತಾದ ವಿಷಯಗಳ ಸಂಬಂಧ ದಾಖಲಾತಿಗಳನ್ನು ಸಲ್ಲಿಸುವಂತೆ/ ಹಣ ಪಾವತಿಸುವಂತೆ ಯಾವುದೇ ಇ-ಮೇಲ್, ದೂರವಾಣಿ ಕರೆ, ಸಂದೇಶ ಅಥವಾ ಖುದ್ದಾಗಿ ಸಂಪರ್ಕಿಸುವುದಾಗಲೀ ಮಾಡಿದ್ದಲ್ಲಿ ಕೂಡಲೇ ಮಹಾನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತಮಹಲ್ ರಸ್ತೆ, ಇವರಲ್ಲಿ ಲಿಖಿತವಾಗಿ ಮನವಿಯನ್ನು ಸಲ್ಲಿಸಲು ತಿಳಿಸಲಾಗಿದೆ. ಒಂದು ವೇಳೆ ಯಾವುದೇ ಅಭ್ಯರ್ಥಿಯು ಅನಧಿಕೃತ ವ್ಯಕ್ತಿಗಳಿಗೆ ದಾಖಲಾತಿಗಳನ್ನು ಸಲ್ಲಿಸಿದ್ದಲ್ಲಿ ಮತ್ತು ಹಣ ಪಾವತಿಸಿದ್ದಲ್ಲಿ ಸಂಸ್ಥೆಯು ಜವಾಬ್ದಾರಿಯಾಗಿರುವುದಿಲ್ಲ. ನೇಮಕಾತಿ ವಿಷಯದಲ್ಲಿ ಅಭ್ಯರ್ಥಿಗಳಿಗೆ ಯಾವುದೇ ರೀತಿಯ ಆಮಿಷ ತೋರಿಸುವುದು/ ವಂಚನೆ ಮಾಡುವವರು ಕಂಡು ಬಂದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಮೊಕ್ಕದ್ದಮೆ ದಾಖಲಿಸಲಾಗುವುದು.

ಸಹಿ/-

ಮಹಾ ನಿರ್ದೇಶಕರು

ಆಡಳಿತ ತರಬೇತಿ ಸಂಸ್ಥೆ, ಮೈಸೂರು

**ಅನುಬಂಧ-1**

**ಬೆರಳಚ್ಚುಗಾರರ ಕೌಶಲ್ಯ ಪರೀಕ್ಷೆ ಪಠ್ಯಕ್ರಮ.**

| ಪರೀಕ್ಷಾ ವಿಷಯ | ವೇಗ ದರ | ಪರೀಕ್ಷೆಯ ಪರ್‍ಯಾಂಶಗಳು | ಉಕ್ತಲೇಖನ ಉತ್ತರಾವಧಿ | ಲಿಪ್ಯಾಂತರದ ಅವಧಿ | ಉತ್ತರ ವಿಧಾನ(ಪರೀಕ್ಷಾ ವಿಧಾನ) | ಗರಿಷ್ಟಾಂಕ | ಅರ್ಹತಾಂಕ |
|---|---|---|---|---|---|---|---|
| ಕನ್ನಡದ ಬೆರಳಚ್ಚು ವೇಗ ಕೌಶಲ್ಯ | 34 ಡಬ್ಲ್ಯೂ ಪಿಎಂ | 1700 ಒತ್ತುಗಳು (5 ಒತ್ತು ಗಳಿಗೆ 01 ಪದ- 34*5*10 ನಿಮಿಷ | 10 ನಿಮಿಷಗಳು | - | ಗಣಕ ಯಂತ್ರದ ಮೂಲಕ | 100 | 50 |

- ಗರಿಷ್ಟ ಅಂಕಗಳು 100 ಹಾಗೂ ಅರ್ಹತಾ ಅಂಕಗಳು 50 ಆಗಿರುತ್ತದೆ.

H S YASHASVINI
Digitally signed by H S YASHASVINI
Date: 2024.01.12 13:31:41 +05'30'